ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ
"ಸಾರಿಗೆ ಭವನ" ಕೇಂದ್ರ ಕಛೇರಿ,
ಕೆ.ಎಚ್.ರಸ್ತೆ, ಶಾಂತಿನಗರ, ಬೆಂಗಳೂರು-560 027. ಭಾರತ
ದೂರವಾಣಿ : 080-22221321 / 22221325
ವೆಬ್-ಸೈಟ್ : www.ksrtc.in

Karnataka State Road Transport Corporation
"Transport House" Central Offices,
K.H.Road, Shanthinagar, Bangalore-560 027.India
Tel : 080-22221321 / 25
Website : www.ksrtc.in

ದಿನಾಂಕ: 16/04/2020

ಸಂಖ್ಯೆ: ಕರಾಸಾ/ಕೇಕ/ಆಡಳಿತ/ಎ1-11/001/2020-21

## ಆದೇಶ

**ವಿಷಯ:** ಜಾಗತಿಕ ಮಟ್ಟದಲ್ಲಿ ಕೊರೋನಾ ವೈರಸ್ (ಕೋವಿಡ್-19) ಹರಡುತ್ತಿರುವ ಹಿನ್ನೆಲೆಯಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಮುಂದುವರೆದ ನಿರ್ದೇಶನಗಳು.

**ಉಲ್ಲೇಖ:** 1. ಸರ್ಕಾರದ ಸುತ್ತೋಲೆ ಸಂಖ್ಯೆ:ಸಿಆಸುಇ 123 ಡಿಬಿಎಂ 2020 ದಿ: 15.04.2020
2. ಕರಾಸಾ/ಕೇಕ/ಆಡಳಿತ/ಎ1-11/1258/2019-20 ದಿ: 15/04/2020

*****

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಗಳಿಗೆ ಸಂಬಂಧಿಸಿದಂತೆ, ಉಲ್ಲೇಖ-1 ರಲ್ಲಿನ ಸರ್ಕಾರದ ಆದೇಶದಂತೆ ಉಲ್ಲೇಖ-2 ರ ಆದೇಶದಲ್ಲಿ ಕ.ರಾ.ರ.ಸಾ. ನಿಗಮದ ಕೇಂದ್ರ ಕಛೇರಿ, ವಿಭಾಗೀಯ ಕಛೇರಿ, ಮುದ್ರಣಾಲಯ, ತರಬೇತಿ ಕೇಂದ್ರಗಳು ಹಾಗೂ ಆಸ್ಪತ್ರೆ ಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಎಲ್ಲಾ ವರ್ಗದ ಅಧಿಕಾರಿ/ಸಿಬ್ಬಂದಿಗಳು ಕೂಡಲೇ ಕರ್ತವ್ಯಕ್ಕೆ ಹಾಜರಾಗತಕ್ಕದ್ದು ಎಂದು ಸೂಚಿಸಲಾಗಿರುತ್ತದೆ.

ಮುಂದುವರೆದು, ರಾಜ್ಯದ ಹಲವು ಪ್ರದೇಶಗಳನ್ನು ಸೀಲ್ ಡೌನ್/ಲಾಕ್ ಡೌನ್ / ಹಾಟ್ ಸ್ಪಾಟ್ ಗಳೆಂದು ಗುರುತಿಸಲಾಗಿದ್ದು, ಸದರಿ ಪ್ರದೇಶಗಳಲ್ಲಿ ವಾಸವಿರುವ ಸಿಬ್ಬಂದಿಗಳು ಕರ್ತವ್ಯಕ್ಕೆ ಹಾಜರಾಗಲು ಸಾಧ್ಯವಾಗುತ್ತಿಲ್ಲವಾದ್ದರಿಂದ ಕಛೇರಿಯ ದೈನಂದಿನ ಕೆಲಸ ಕಾರ್ಯಗಳಿಗೆ ಅಡಚಣೆಯಾಗದಂತೆ ಕನಿಷ್ಠ ಸಿಬ್ಬಂದಿಗಳು ಮಾತ್ರ ಅವಶ್ಯಕತೆಗೆ ತಕ್ಕಂತೆ ಕಛೇರಿಗೆ ಹಾಜರಾಗಲು ಸೂಚಿಸಲು ಸಂಬಂಧಪಟ್ಟ ಮೇಲಾಧಿಕಾರಿಗಳಿಗೆ ತಿಳಿಸಲಾಗಿದೆ.

ಅಧಿಕಾರಿಗಳನ್ನು ಹೊರತುಪಡಿಸಿ ಉಳಿದ ಸಿಬ್ಬಂದಿಗಳು ಕಛೇರಿಯ ಕರ್ತವ್ಯಕ್ಕೆ ಹಾಜರಾಗುವುದರಿಂದ ವಿನಾಯಿತಿ ನೀಡಲಾಗಿದ್ದು ಈ ಸಿಬ್ಬಂದಿಗಳ ಹಾಜರಾತಿಯ ಬಗ್ಗೆ ಮುಂದಿನ ದಿನಗಳಲ್ಲಿ ತೀರ್ಮಾನಿಸಲಾಗುವುದು.

ಸಂಬಂಧಪಟ್ಟವರೆಲ್ಲರೂ ಮೇಲಿನ ನಿರ್ದೇಶನಗಳನ್ನು ತಪ್ಪದೇ ಪಾಲಿಸಲು ಸೂಚಿಸಲಾಗಿದೆ.

ಸಹಿ/-
(ಶಿವಯೋಗಿ.ಸಿ.ಕಳಸದ, ಭಾ.ಆ.ಸೇ.,)
ವ್ಯವಸ್ಥಾಪಕರು ನಿರ್ದೇಶಕರು

**ಪ್ರತಿ ಮಾಹಿತಿಗಾಗಿ:**

1. ವ್ಯವಸ್ಥಾಪಕ ನಿರ್ದೇಶಕರು, ಬೆಂಮಸಾ ಸಂಸ್ಥೆ/ವಾಕರಸಾ ಸಂಸ್ಥೆ/ಈಕರಸಾ ಸಂಸ್ಥೆ ರವರಿಗೆ.
2. ನಿರ್ದೇಶಕರು(ಸಿ:ಪ)/ ನಿರ್ದೇಶಕರು(ಭ:ಜಾ), ಕರಾರಸಾ ನಿಗಮ, ರವರಿಗೆ.

**ಪ್ರತಿ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ:**

3. ಎಲ್ಲಾ ಇಲಾಖಾ ಮುಖ್ಯಸ್ಥರುಗಳು/ವಿಭಾಗೀಯ ಮುಖ್ಯಸ್ಥರುಗಳು/ಕಾರ್ಯ ವ್ಯವಸ್ಥಾಪಕರು/ ಪ್ರಾಂಶುಪಾಲರು ಕರಾರಸಾ ನಿಗಮ ರವರುಗಳಿಗೆ.
4. ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು, ಬೆಂಮಸಾ ಸಂಸ್ಥೆ/ವಾಕರಸಾ ಸಂಸ್ಥೆ/ಈಕರಸಾ ಸಂಸ್ಥೆ ರವರಿಗೆ.
5. ಭದ್ರತಾ ಮತ್ತು ಜಾಗ್ರತಾಧಿಕಾರಿ, ಕರಾರಸಾ ನಿಗಮ, ಕೇಂದ್ರ ಕಚೇರಿ, ಬೆಂಗಳೂರು ರವರಿಗೆ, ಕಚೇರಿ ಆದೇಶವನ್ನು ಕೇಂದ್ರ ಕಛೇರಿಯ ಸೂಚನಾ ಫಲಕದಲ್ಲಿ ಪ್ರದರ್ಶಿಸಿ, ಪ್ರದರ್ಶಿತಗೊಂಡ ಬಗ್ಗೆ ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು (ಸಿಬ್ಬಂದಿ) ರವರಿಗೆ ವರದಿ ಸಲ್ಲಿಸುವುದು.
6. ಮುಖ್ಯ ಗಣಕ ವ್ಯವಸ್ಥಾಪಕರು, ಕರಾರಸಾ ನಿಗಮ, ಕೇಂದ್ರ ಕಚೇರಿ, ಬೆಂಗಳೂರು ರವರಿಗೆ, ಕಚೇರಿ ಆದೇಶವನ್ನು ನಿಗಮದ ಅಧಿಕೃತ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.

ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು(ಸಿ)

Generated by CamScanner